ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
*ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ*
ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001

ಸಂಖ್ಯೆ: ವಾಇ : ಸುಮಪ : ಪ ಪ್ರ : 2014–15 : ಆಗಸ್ಟ್ 22 , 2014

ಪತ್ರಿಕಾ ಪ್ರಕಟಣೆ

## ಯು. ಆರ್. ಅನಂತಮೂರ್ತಿ ನಿಧನ : ರಾಜ್ಯಾದ್ಯಂತ ಮೂರು ದಿನಗಳ ಶೋಕಾಚರಣೆ, ಮೃತರ ಗೌರವಾರ್ಥ ನಾಳೆ ಶಾಲಾ–ಕಾಲೇಜುಗಳು ಹಾಗೂ ಸರ್ಕಾರಿ ಕಚೇರಿಗಳಿಗೆ ರಜೆ ಘೋಷಣೆ, ಸರ್ಕಾರಿ ಗೌರವಗಳೊಡನೆ ಅಂತ್ಯ ಸಂಸ್ಕಾರ

ಬೆಂಗಳೂರು, ಆಗಸ್ಟ್ 22 (ಕರ್ನಾಟಕ ವಾರ್ತೆ) :

ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಡಾ ಯು ಆರ್ ಅನಂತಮೂರ್ತಿ ಅವರ ನಿಧನದ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಮೂರು ದಿನಗಳ ಶೋಕಾಚರಣೆಯನ್ನು ಪ್ರಕಟಿಸಿರುವ ರಾಜ್ಯ ಸರ್ಕಾರ, ಮೃತರ ಗೌರವಾರ್ಥ ಆಗಸ್ಟ್ 23 ರಂದು ರಾಜ್ಯದ ಎಲ್ಲಾ ಶಾಲಾ–ಕಾಲೇಜುಗಳು ಹಾಗೂ ಸರ್ಕಾರಿ ಕಚೇರಿಗಳಿಗೆ ರಜೆ ಘೋಷಿಸಿದೆ.

ಅಲ್ಲದೆ, ಮೃತರ ಕುಟುಂಬ ವರ್ಗದವರ ಜೊತೆಯಲ್ಲಿ ಸಮಾಲೋಚಿಸಿ ಸಕಲ ಸರ್ಕಾರಿ ಮರ್ಯಾದೆಗಳೊಡನೆ ಡಾ ಅನಂತಮೂರ್ತಿ ಅವರ ಅಂತ್ಯಕ್ರಿಯೆ ನಡೆಸಲು ಸರ್ಕಾರ ನಿರ್ಧರಿಸಿದೆ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

ಶೋಕಾಚರಣೆಯ ಸಂದರ್ಭದಲ್ಲಿ ರಾಷ್ಟ್ರ ಧ್ವಜವನ್ನು ನಿಯತವಾಗಿ ಹಾರಿಸುವ ಎಲ್ಲಾ ಸರ್ಕಾರಿ ಕಟ್ಟಡಗಳಲ್ಲಿ ರಾಷ್ಟ್ರ ಧ್ವಜವನ್ನು ಅರ್ಧಮಟ್ಟಕ್ಕೆ ಇಳಿಸಲಾಗುವುದು. ಈ ಅವಧಿಯಲ್ಲಿ ಸರ್ಕಾರಿ ಸಮಾರಂಭಗಳು ಹಾಗೂ ಮನರಂಜನಾ ಕಾರ್ಯಕ್ರಮಗಳು ನಡೆಯುವುದಿಲ್ಲ.

### ಕೃಷ್ಣ ಜಯಂತಿ ಸಮಾರಂಭ ಮುಂದೂಡಿಕೆ

ಡಾ ಯು ಆರ್ ಅನಂತಮೂರ್ತಿ ಅವರ ನಿಧನದ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಮೂರು ದಿನಗಳ ಶೋಕಾಚರಣೆ ಪ್ರಕಟಿಸಿರುವ ಹಿನ್ನೆಲೆಯಲ್ಲಿ ಆಗಸ್ಟ್ 23 ರಂದು ಬೆಂಗಳೂರಿನ ವಿಧಾನಸೌಧದ ಔತಣ ಸಭಾಂಗಣದಲ್ಲಿ ರಾಜ್ಯ ಸರ್ಕಾರದ ವತಿಯಿಂದ ಆಯೋಜಿಸದ್ದ ಶ್ರೀ ಕೃಷ್ಣ ಜಯಂತಿ ಸಮಾರಂಭವನ್ನು ಮುಂದೂಡಲಾಗಿದೆ.

*************

ಡಿ ಪಿ ಎಂ